Central Government Scheme

17) Merit-cum-means Scholarship
18) Pre-matric Scholarship
19) Post-matric Scholarship

ಬೆಂಗಳೂರು ನಗರದಲ್ಲಿರುವ ಆಸ್ಪತ್ರೆಗಳಿಗೆ ಮಂಜೂರಾಗಿರುವ ಹುದ್ದೆಗಳು

904 (972) ಶ್ರೀ ನರೇಂದ್ರ ಬಾಬು ನೆ.ಲ. (ಮಹಾಲಕ್ಷ್ಮಿ ಲೇಔಟ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯರು, ಶುಶ್ರೂಷಕಿಯರು ಮತ್ತು ಇನ್ನಿತರೆ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಹುದ್ದೆಗಳಲ್ಲಿ ಭರ್ತಿಯಾಗಿರುವ ಖಾಲಿಯಾಗಿರುವ ಹುದ್ದೆಗಳು ಎಷ್ಟು (ಆಸ್ಪತ್ರೆವಾರು ಮಾಹಿತಿ ನೀಡುವುದು);

ಇ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬೆಂಗಳೂರು ನಗರದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 119 ವೈದ್ಯರು, 230 ಶುಶ್ರೂಷಕಿಯರು ಮತ್ತು 600 ಇನ್ನಿತರೆ ಹುದ್ದೆಗಳು ಮಂಜೂರಾಗಿವೆ.

ಆ) ಸದರಿ ಆಸ್ಪತ್ರೆಗಳಲ್ಲಿ 84 ವೈದ್ಯರು, 189 ಶುಶ್ರೂಷಕಿಯರು ಮತ್ತು 416 ಇನ್ನಿತರೆ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

35 ವೈದ್ಯರು, 41 ಶುಶ್ರೂಷಕಿಯರು ಮತ್ತು 184 ಇನ್ನಿತರೆ ಹುದ್ದೆಗಳು ಖಾಲಿ ಇವೆ. (ಆಸ್ಪತ್ರೆವಾರು ಮಾಹಿತಿಯನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.)

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.

ಅನುಬಂಧ - 1

ಬೆಂಗಳೂರು ನಗರ ಜಿಲ್ಲೆಯ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರು, ಶುಶ್ರೂಷಕರು ಹಾಗೂ ಇತರೆ ಹುದ್ದೆಗಳ ವಿವರ.

ಕ್ರ.ಸಂ.	ಆಸ್ಪತ್ರೆಯ ಹೆಸರು	ವೈದ್ಯರು			ಶುಶ್ರೂಷಕರು			ಇತರೆ ಸಿಬ್ಬಂದಿ		
		ಮಂಜೂರು	ಕಾರ್ಯನಿರತ	ಖಾಲಿ	ಮಂಜೂರು	ಕಾರ್ಯನಿರತ	ಖಾಲಿ	ಮಂಜೂರು	ಕಾರ್ಯನಿರತ	ಖಾಲಿ
1	ಸಾರ್ವಜನಿಕ ಆಸ್ಪತ್ರೆ, ಜಯನಗರ	46	28	18	76	50	26	186	133	53
2	ಕೆ. ಸಿ. ಜನರಲ್ ಆಸ್ಪತ್ರೆ	45	32	13	84	69	15	131	83	48
3	ಇ.ಡಿ. ಆಸ್ಪತ್ರೆ	5	4	1	17	17	0	50	29	21
4	ಇಂದಿರಾ ನಗರ ಸಾರ್ವಜನಿಕ ಆಸ್ಪತ್ರೆ	6	6	0	21	21	0	87	60	27
5	ಫೋವಾ ಆಸ್ಪತ್ರೆ	11	8	3	16	16	0	95	81	14
6	ಕುಷ್ಠರೋಗ ಆಸ್ಪತ್ರೆ	6	6	0	16	16	0	51	30	21
ಒಟ್ಟು		119	84	35	230	189	41	600	416	184

ಅನುಬಂಧ – 2

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ

2. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸ ಲಾಗುವುದು.

8. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಠ ರೂ. 50,000 ರವರೆಗೆ ಗೌರವಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್. ಹೆಚ್.ಎಂ.) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ.500, (2) ಅರೆವಳಿಕೆ ತಜ್ಞರಿಗೆ ರೂ.1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ.1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.

9. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ: 2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ. 5,000 ಗೌರವಧನ ನೀಡಿ ರಿಟೈನರ್‌ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ, ಇದೇ ಕೆ.ಹೆಚ್.ಎಸ್.ಆರ್ಸ್ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

10. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ

ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

11. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
12. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
13. ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆ

906 (1379) ಶ್ರೀ ಪಾಟೀಲ್ ಎಂ.ಬಿ (ಬಬಲೇಶ್ವರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2007-08, 2008-09ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಬಿ.ಸಿ.ಎಂ. ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಕೊರೆದ ವೈಯಕ್ತಿಕ ಕೊಳವೆ ಬಾವಿಯ ಸಂಖ್ಯೆ ಎಷ್ಟು (ವಿವರವಾದ ಮಾಹಿತಿ ಒದಗಿಸುವುದು);

ಆ) ಇವುಗಳಲ್ಲಿ ವಿದ್ಯುತ್ ಪೂರೈಕೆ ಮಾಡಿದ ಕೊಳವೆಬಾವಿಗಳು ಎಷ್ಟು (ವಿವರವಾದ ಮಾಹಿತಿ ನೀಡುವುದು);

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 2007-08ರಲ್ಲಿ ಒಟ್ಟು 514 ಹಾಗೂ 2008-09ರಲ್ಲಿ ಒಟ್ಟು 451 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ.